**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ), 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-560012**

**ಇ-ಮೇಲ್:commissioner.pue@gmail.com ಸ್ಥಿರ ದೂರವಾಣಿ ಸಂ:080-23562033**

ಸಂಖ್ಯೆ:DPUE-ACA0OTH/1/2026(E-2019758) ದಿನಾಂಕ: 03-01-2026

**ಸುತ್ತೋಲೆ**

ವಿಷಯ: ಶಾಲಾ ಶಿಕ್ಷಣ ಇಲಾಖೆ(ಪದವಿ ಪೂರ್ವ)ದ ವ್ಯಾಪ್ತಿಯಡಿ ಬರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಜನವರಿ / ಫೆಬ್ರುವರಿ ಮಾಹೆಯಲ್ಲಿ ತರಗತಿಗಳನ್ನು ನಡೆಸುವ ಕುರಿತು.

ಉಲ್ಲೇಖ: 2025-26 ನೇ ಸಾಲಿನ ಇಲಾಖಾ ಮಾರ್ಗಸೂಚಿ.

-*-

ಶಾಲಾ ಶಿಕ್ಷಣ ಇಲಾಖೆಯ (ಪದವಿ ಪೂರ್ವ) ವ್ಯಾಪ್ತಿಯಡಿ ನಡೆಯುತ್ತಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ, ಜೂನ್ ಮಾಹೆಯಿಂದ ಮಾರ್ಚ್ ಅಂತ್ಯದವರೆಗೆ ತರಗತಿಗಳನ್ನು ನಡೆಸಿಕೊಂಡು ಹೋಗಲು ಈಗಾಗಲೇ ಇಲಾಖಾ ಶೈಕ್ಷಣಿಕ ಮಾರ್ಗಸೂಚಿಯಲ್ಲಿ ನಿರ್ದೇಶನ ನೀಡಲಾಗಿರುತ್ತದೆ. ಆದರೆ ಈ ಹಿಂದಿನ ವರ್ಷಗಳಲ್ಲಿ ಡಿಸೆಂಬರ್ ಅಂತ್ಯದವರೆಗೆ ಪಠ್ಯಕ್ರಮ ಮುಕ್ತಾಯಗೊಂಡಲ್ಲಿ ವಿದ್ಯಾರ್ಥಿಗಳಿಗೆ ಪರೀಕ್ಷಾ ತಯಾರಿ ಮಾಡಿಕೊಳ್ಳಲು ಉದ್ದೇಶಿಸಿ, ಕಾಲೇಜು ಹಂತದಲ್ಲಿ ರಜೆಗಳನ್ನು ಘೋಷಿಸಿಕೊಳ್ಳುವುದು ಅಥವಾ ತರಗತಿಗಳನ್ನು ನಡೆಸದೇ ಇರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಜನವರಿ / ಫೆಬ್ರುವರಿ ಮಾಹೆಯಲ್ಲಿ ಕಾಲೇಜುಗಳಲ್ಲಿ ಈ ಕೆಳಕಂಡ ಅಂಶಗಳ ಬಗ್ಗೆ ಗಮನಹರಿಸುವುದು.

1. ಪಠ್ಯಕ್ರಮ ಮುಕ್ತಾಯಗೊಂಡಿದೆ ಎಂಬ ಕಾರಣಕ್ಕಾಗಿ ಕಾಲೇಜು ಹಂತದಲ್ಲಿ ರಜೆಗಳನ್ನು ಘೋಷಿಸುವಂತಿಲ್ಲ.
2. ದ್ವಿತೀಯ ಪಿಯುಸಿ ಪರೀಕ್ಷೆಗಳು ಪ್ರಾರಂಭಗೊಳ್ಳುವವರೆಗೆ ಅಂದರೆ ದಿನಾಂಕ:27-02-2026 ರವರೆಗೂ ಕ್ರಮಾನುಗತವಾಗಿ ಪಾಠ ಬೋಧನೆ ಅಥವಾ ಪಾಠಬೋಧನೆಯ ಪುನರ್‌ಮನನ ಇಲ್ಲವೇ ಪರಿಹಾರ ಬೋಧನಾ ಕಾರ್ಯಕ್ರಮಗಳನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವುದು.
3. ಎಲ್ಲಾ ಕಾರ್ಯನಿರತ ದಿನಗಳಲ್ಲಿಯೂ (ಪರೀಕ್ಷಾ ನಡೆಯುವ ದಿನಾಂಕಗಳಲ್ಲಿಯೂ ಸಹ) ವಿದ್ಯಾರ್ಥಿಗಳ ಹಾಜರಾತಿಯನ್ನು SATS ನಲ್ಲಿ ಕಡ್ಡಾಯವಾಗಿ ನಮೂದಿಸುವುದು.
4. ಪ್ರಾಯೋಗಿಕ ವಿಷಯಗಳಿಗೆ ಪ್ರಾಯೋಗಿಕ ಪರೀಕ್ಷೆಗಳು ನಡೆಯುತ್ತಿರುವ ಸಂದರ್ಭದಲ್ಲಿ ಪ್ರಾಯೋಗಿಕವಲ್ಲದ ವಿಷಯಗಳ ಪರಿಹಾರ ಬೋಧನಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವುದು.
5. ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗಳು ನಡೆಯುತ್ತಿರುವ ಸಂದರ್ಭದಲ್ಲಿ ಮುಂದಿನ ಪರೀಕ್ಷಾ ವಿಷಯದ ಬಗ್ಗೆ (ಮಾದರಿ ಪ್ರಶ್ನೆ ಪತ್ರಿಕೆ ಉತ್ತರಿಸುವಿಕೆ, ಪ್ರಶ್ನೆಕೋಠಿಯಲ್ಲಿನ ಪ್ರಶ್ನೆಗಳ ಉತ್ತರಿಸುವಿಕೆ, ಬರಬಣಿಗೆ ಅಭ್ಯಾಸ) ಪುನರ್ಮನನ ಮಾಡುವುದು.
6. ಪ್ರಥಮ ಪಿಯುಸಿ ಪರೀಕ್ಷೆಗಳು ನಡೆಯುತ್ತಿವೆ ಎಂಬ ಕಾರಣಕ್ಕಾಗಿ ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ರಜೆ ಘೋಷಿಸುವಂತಿಲ್ಲ.
7. ಪ್ರಾಯೋಗಿಕ ವಿಷಯಗಳಲ್ಲಿ ಬಾಹ್ಯ ಪರೀಕ್ಷಕರಾಗಿ ನಿಯೋಜಿತರಾದ ಉಪನ್ಯಾಸಕರು ತಮಗೆ ಪರೀಕ್ಷಾ ಕಾರ್ಯ ಇಲ್ಲದ ದಿನಗಳಲ್ಲಿ ತಮ್ಮ ಕಾಲೇಜು ಕರ್ತವ್ಯಕ್ಕೆ ಹಾಜರಾಗಿ, ವಿದ್ಯಾರ್ಥಿಗಳನ್ನು ಪರೀಕ್ಷೆಗೆ ಸಿದ್ದಪಡಿಸುವ ಕಾರ್ಯ ನಡೆಸುವುದು.

ಈ ಮೇಲಿನ ಅಂಶಗಳನ್ನು ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರು ತಮ್ಮ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಗಮನಕ್ಕೆ ತಂದು, ಸೂಕ್ತ ಕ್ರಮ ತೆಗೆದುಕೊಳ್ಳುವಂತೆ ಸೂಚಿಸುವುದು.

Digitally signed by
BHARATH
Date: 03-01-2026
14:04:11

ನಿರ್ದೇಶಕರು
ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ)

**ಇವರಿಗೆ,**
ರಾಜ್ಯದ ಎಲ್ಲಾ ಜಿಲ್ಲಾ ಉಪ ನಿರ್ದೇಶಕರು, ಶಾಲಾ ಶಿಕ್ಷಣ ಇಲಾಖೆ (ಪದವಿ ಪೂರ್ವ) - ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು:**

1. ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ – ಜಿಲ್ಲಾ ಉಪ ನಿರ್ದೇಶಕರ ಮುಖಾಂತರ.
2. ಸಹಾಯಕ ನಿರ್ದೇಶಕರು (ಇ-ಆಡಳಿತ) ಇಲಾಖಾ ಜಾಲತಾಣದಲ್ಲಿ ಪ್ರಕಟಿಸುವುದು ಮತ್ತು ಜಿಲ್ಲಾ ಉಪ ನಿರ್ದೇಶಕರ ಕಚೇರಿಗೆ ಇ-ಮೇಲ್ ಕಳುಹಿಸುವುದು.
3. ಕಚೇರಿ / ಹೆಚ್ಚುವರಿ ಪ್ರತಿ.